ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 ದಿನಾಂಕ: 24–09–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖಾ ಪತ್ತಿನ ನೌಕರರ ಸಹಕಾರ ಸಂಘದ 35ನೇ ವಾರ್ಷಿಕ ಸಾಮಾನ್ಯ ಸಭೆ ಮತ್ತು ಸುವರ್ಣ ಮಹೋತ್ಸವ:<br><br>ಉದ್ಘಾಟನೆ:<br><br>ವಿ. ಶ್ರೀನಿವಾಸಪ್ರಸಾದ್,<br>ಕಂದಾಯ ಸಚಿವರು<br><br>ಮುಖ್ಯ ಅತಿಥಿ:<br><br>ಹೆಚ್.ಎಸ್. ಮಹದೇವ ಪ್ರಸಾದ್,<br>ಸಹಕಾರ ಸಚಿವರು | 25–09–2015<br><br>ಶುಕ್ರವಾರ<br><br>ಬೆಳಿಗ್ಗೆ<br><br>10–00 ಗಂಟೆಗೆ | ಹೋಟೆಲ್ ಸಿಟಿ ಸೆಂಟರ್ ಹಾಲ್, ಶಾಂತಲಾ ಸಿಲ್ಕ್ ಹೌಸ್, ಬೆಂಗಳೂರು ಸಿಟಿ ರೈಲ್ವೆ ಸ್ಟೇಷನ್ ಹತ್ತಿರ,<br><br>ಬೆಂಗಳೂರು. |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

# ಅವಧಿ ವಿಸ್ತರಣೆ

ಬೆಂಗಳೂರು, ಸೆಪ್ಟೆಂಬರ್ 24 (ಕರ್ನಾಟಕ ವಾರ್ತೆ)

ಬೆಂಗಳೂರು ನಗರ ಜಿಲ್ಲಾ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯು 2015-16 ನೇ ಸಾಲಿನಲ್ಲಿ ಆಧುನೀಕರಣ ತಾಂತ್ರಿಕ ತರಬೇತಿ ಯೋಜನೆಯಡಿ ಕೌಶಲ್ಯಭಿವೃದ್ಧಿ ತರಬೇತಿ ನೀಡುವ ಸೌಲಭ್ಯಕ್ಕಾಗಿ ಅರ್ಜಿಗಳನ್ನು ಸ್ವೀಕರಿಸುವ ಕಡೆಯ ದಿನಾಂಕವನ್ನು 25-09-2015 ಎಂದು ನಿಗದಿ ಪಡಿಸಲಾಗಿತ್ತು. ಆದರೆ ಅರ್ಜಿಗಳನ್ನು ಸ್ವೀಕರಿಸುವ ಕಡೆಯ ದಿನಾಂಕವನ್ನು 25-09-2015 ರಿಂದ 26-09-2015 ರವರೆಗೆ ವಿಸ್ತರಿಸಲಾಗಿದೆ.

ಅರ್ಜಿ ಸಲ್ಲಿಸಿದ ಎಲ್ಲಾ ಫಲಾನುಭವಿಗಳು ದಿನಾಂಕ: 29-09-2015 ರಂದು ಬೆಳಿಗ್ಗೆ 11-00 ಗಂಟೆಗೆ ನಿರ್ದೇಶಕರ ಕಚೇರಿ, ಜಿಲ್ಲಾ ಕೈಗಾರಿಕಾ ಕೇಂದ್ರ ಕೈಗಾರಿಕಾ ವಸಾಹತು, ವೆಸ್ಟ್ ಆಫ್ ಕಾರ್ಡ್ ರೋಡ್, ರಾಜಾಜಿನಗರ, ಬೆಂಗಳೂರು – 560 010 ಇಲ್ಲಿ ನಡೆಯುವ ಸಂದರ್ಶನಕ್ಕೆ ಅರ್ಜಿ ಜೊತೆ ಸಲ್ಲಿಸಿರುವ ಎಲ್ಲಾ ಮೂಲ ದಾಖಲೆಗಳೊಂದಿಗೆ ಹಾಜರಾಗತಕ್ಕದ್ದು. ಪ್ರತ್ಯೇಕವಾಗಿ ಯಾವುದೇ ಸಂದರ್ಶನ ಪತ್ರ ಕಳುಹಿಸಲಾಗುವುದಿಲ್ಲ ಎಂದು ಇಲಾಖೆಯ ಪ್ರಕಟಣೆ ತಿಳಿಸಿದೆ.

ಪಲ್ಲವಿ:ಬಾಬು:ಜಿಪಿಆರ್

# ಕೃಷಿ ಮೇಳ

ಬೆಂಗಳೂರು, ಸೆಪ್ಟೆಂಬರ್ 24 (ಕರ್ನಾಟಕ ವಾರ್ತೆ)

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ ಮತ್ತು ಕರ್ನಾಟಕ ಸರ್ಕಾರದ ವಿವಿಧ ಅಭಿವೃದ್ಧಿ ಇಲಾಖೆಗಳ ಜೊತೆಗೂಡಿ ಕೃಷಿಮೇಳ-2015 ನವೆಂಬರ್ 19 ರಿಂದ 22 ರವರೆಗೆ (ನಾಲ್ಕು ದಿನಗಳು) ಜಿಕೆವಿಕೆಯ ಕೃಷಿ ಮೈದಾನದಲ್ಲಿ ಹಮ್ಮಿಕೊಂಡಿದೆ. ಈ ಕೃಷಿ ಮೇಳದಲ್ಲಿ ಕೃಷಿ ವಸ್ತು ಪ್ರದರ್ಶನದ ಜೊತೆಯಲ್ಲಿ ರಾಷ್ಟ್ರೀಯ ಸಾವಯವ ಕೃಷಿ ವಸ್ತು ಪ್ರದರ್ಶನ, ರಾಷ್ಟ್ರೀಯ ಕೃಷಿ ಯಂತ್ರೋಪಕರಣಗಳ ಪ್ರದರ್ಶನ, ಮತ್ಸ್ಯಮೇಳ ಮತ್ತು ಗ್ರಾಮೀಣ ರೈತರ "ಹಳ್ಳಿ ಸಂತೆ" ವಸ್ತು ಪ್ರದರ್ಶನ ಸಹ ಏರ್ಪಡಿಸಲಾಗಿದೆ.

ವಿವಿಧ ಸರ್ಕಾರಿ ಸಂಸ್ಥೆಗಳು, ನಿಗಮ, ಸರ್ಕಾರೇತರ ಸಂಸ್ಥೆಗಳು, ಮಂಡಳಿಗಳು, ಕೃಷಿ ಪರಿಕರಗಳ ಉತ್ಪಾದಕರು ಮತ್ತು ಮಾರಾಟಗಾರರು, ಕೃಷಿ ಯಂತ್ರೋಪಕರಣಗಳ ತಯಾರಕರು ಹಾಗೂ ಮಾರಾಟಗಾರರು, ಹಣಕಾಸು ಸಂಸ್ಥೆಗಳು ಹಾಗೂ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿಗೆ ಪೂರಕವಾಗಿರುವ ಸಂಘ ಸಂಸ್ಥೆಗಳು ವಸ್ತು ಪ್ರದರ್ಶನದಲ್ಲಿ ಭಾಗವಹಿಸಿ, ತಮ್ಮ ತಂತ್ರಜ್ಞಾನ/ಪರಿಕರಗಳು/ಸೇವಾ ಸೌಲಭ್ಯಗಳನ್ನು ಪ್ರದರ್ಶಿಸಲು ಇಚ್ಛಿಸುವವರು ಮಳಿಗೆಯನ್ನು ಕಾದಿರಿಸಲು ಕೊನೆಯ ದಿನಾಂಕ 5-11-2015. ಹೆಚ್ಚಿನ ಮಾಹಿತಿಗಾಗಿ ವಿಸ್ತರಣಾ ನಿರ್ದೇಶಕರು, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು – 560 024 ಇವರನ್ನು ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080-2351 6353/080-2341 883 ಹಾಗೂ ಮೊಬೈಲ್ : 9844176675, 9902754000, ಫ್ಯಾಕ್ಸ್ 080-2351 6836. ನ್ನು ಸಂಪರ್ಕಿಸಬಹುದು.

ಪಲ್ಲವಿ:ಬಾಬು:ಜಿಪಿಆರ್

## ಸಂದರ್ಶನ

ಬೆಂಗಳೂರು, ಸೆಪ್ಟೆಂಬರ್ 24 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿನ ಸಾಮಾನ್ಯ ವಿಜ್ಞಾನ ಶಿಕ್ಷಕರು, ಗಣಿತ ಶಿಕ್ಷಕರು ಹಾಗೂ ಸಮಾಜ ವಿಜ್ಞಾನ ಶಿಕ್ಷಕರ ಹುದ್ದೆಗಳಿಗೆ ದಿನಾಂಕ 05-10-2015 ರಿಂದ 07-10-2015 ಮತ್ತು 20-10-2015 ರಂದು ಸಂದರ್ಶನವನ್ನು ಆಯೋಗದ ಕೇಂದ್ರ ಕಚೇರಿ, ಉದ್ಯೋಗ ಸೌಧ, ಬೆಂಗಳೂರು-560 001 ಇಲ್ಲಿ ನಡೆಸಲಿದೆ.

ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನ ಸೂಚನಾ ಪತ್ರಗಳನ್ನು ಈಗಾಗಲೇ ಕಳುಹಿಸಲಾಗಿದೆ. ಸಂದರ್ಶನಕ್ಕೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿ ಸಂದರ್ಶನದ ವೇಳೆ, ದಿನಾಂಕ ಇತ್ಯಾದಿ ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ 'http://kpsc.kar.nic.in' ನ್ನು ನೋಡಬಹುದು. ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನ ಪತ್ರ ಸ್ವೀಕೃತವಾಗದಿದ್ದಲ್ಲಿ ಸಂಬಂಧಿತ ದಾಖಲೆಗಳೊಂದಿಗೆ ಕೇಂದ್ರ ಕಚೇರಿಯನ್ನು ಸಂದರ್ಶನಕ್ಕೆ ನಿಗದಿಪಡಿಸಿರುವ ದಿನಾಂಕದೊಳಗೆ ಸಂಪರ್ಕಿಸಬಹುದು.

ಪಲ್ಲವಿ:ಬಾಬು:ಜಿಪಿಆರ್

## ಬೆಂಗಳೂರು ಗ್ರಾಮಾಂತರ ಜಿಲ್ಲೆ : ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರ ರಚನೆ

ಬೆಂಗಳೂರು, ಸೆಪ್ಟೆಂಬರ್ 24 (ಕರ್ನಾಟಕ ವಾರ್ತೆ)

ಬೆಂಗಳುರು ಗ್ರಾಮಾಂತರ ಜಿಲ್ಲೆಯ ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರವನ್ನು ರಚಿಸಲಾಗಿದೆ. ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರು ಇದರ ಅಧ್ಯಕ್ಷರಾಗಿರುತ್ತಾರೆ. ನಿವೃತ್ತ ಹೆಚ್ಚುವರಿ ಕಾರ್ಯದರ್ಶಿ ಎ. ಮುನಿನಂಜಪ್ಪ ಹಾಗೂ ನಾಗರಿಕ ಸಮಾಜದ ಒಬ್ಬರು ಇದರ ಸದಸ್ಯರಾಗಿರುತ್ತಾರೆ. ಬೆಂಗಳೂರು ಜಿಲ್ಲೆಯ ಪೊಲೀಸ್ ಅಧಿಕ್ಷಕರು ಸದಸ್ಯ ಕಾರ್ಯದರ್ಶಿಯಾಗಿರುತ್ತಾರೆ.

ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಯಿಂದ ಪೊಲೀಸ್ ಉಪಾಧೀಕ್ಷಕರ ಹುದ್ದೆಯವರೆಗಿನ ಹುದ್ದೆಗಳ ಬಗ್ಗೆ ದೂರು ಸಲ್ಲಿಸಬಹುದಾಗಿದೆ. ಪೊಲೀಸ್ ಅಭಿರಕ್ಷೆಯಲ್ಲಿನ ಸಾವು/ಹತ್ಯಾಚಾರ ಪ್ರಕರಣ, ಅಕ್ರಮ ಬಂಧನ ಪ್ರಕರಣ, ಗಂಭೀರ ಗಾಯ (ಐ.ಪಿ.ಸಿ. 320 ರಲ್ಲಿ ತಿಳಿಸಿರುವಂತೆ) ಠಾಣೆಗೆ ಕರೆದು ಹಿಂಸೆ ನೀಡಿದರೆ. ಹಣ ಅಥವಾ ವಸ್ತುವಿಗಾಗಿ ಬೇಡಿಕೆ/ಬೆದರಿಕೆ, ಕಿರುಕುಳ, ಭೂಕಬಳಿಕೆಯಲ್ಲಿ ಅಧಿಕಾರಿ ದುರುಪಯೋಗ, ಕರ್ತವ್ಯಲೋಪ/ನಿರ್ಲಕ್ಷ್ಯ ವೆಸಗಿದಲ್ಲಿ ದೂರು ಸಲ್ಲಿಸಬಹುದಾಗಿರುತ್ತದೆ.

ತಮ್ಮ ದೂರುಗಳನ್ನು ಅಧ್ಯಕ್ಷರು ಹಾಗೂ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರ, 2ನೇ ಮಹಡಿ, ಬಿ.ಎಂ.ಟಿ.ಸಿ. ಕಟ್ಟಡ, ಕೆ.ಹೆಚ್. ರಸ್ತೆ, ಶಾಂತಿನಗರ, ಬೆಂಗಳೂರು ಇವರಿಗೆ ಸಲ್ಲಿಸಬಹುದಾಗಿದೆ.

ಪಲ್ಲವಿ:ಬಾಬು:ಜಿಪಿಆರ್

## ಈ ಶನಿವಾರದ ಬೆಳ್ಳಿಸಿನಿಮಾ-ಬೆಳ್ಳಿಮಾತು ಮುಂದೂಡಿಕೆ

ಬೆಂಗಳೂರು, ಸೆಪ್ಟೆಂಬರ್ 24 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ-ಬೆಳ್ಳಿಮಾತು ಕಾರ್ಯಕ್ರಮವು ಸೆಪ್ಟೆಂಬರ್ 26 ರಂದು ಶನಿವಾರ ಇರುವುದಿಲ್ಲ. ಕರ್ನಾಟಕದ ವಿವಿಧ ಸಂಘಟನೆಗಳು "ಕರ್ನಾಟಕ ಬಂದ್" ಗೆ ಕರೆನೀಡಿರುವ ಹಿನ್ನೆಲೆಯಲ್ಲಿ ಈ ವಾರದ "ಬೆಳ್ಳಿಸಿನಿಮಾ – ಬೆಳ್ಳಿಮಾತು" ಕಾರ್ಯಕ್ರಮ ಇರುವುದಿಲ್ಲ ಅಕ್ಟೋಬರ್ 3 ರ ಶನಿವಾರದಿಂದ ಎಂದಿನಂತೆ ಬೆಳ್ಳಿಸಿನಿಮಾ-ಬೆಳ್ಳಿಮಾತು ಕಾರ್ಯಕ್ರಮ ನಡೆಯಲಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಹೆಚ್‌ಬಿಡಿ:ಬಾಬು:ಜಿಪಿಆರ್.

## Krishimela

**Bangalore, September 24 (Karnataka Information)**

**The University of Agricultural Sciences, Bangalore and Department of Agriculture, Government of Karnataka in collaboration with different development departments of the Government of Karnataka is organizing Krishimela-2015, (National Agricultural Organic Exhibition and National Agricultural Machinery, Mathsyamela and Halli Santhe(Village Sandy) at GKVK from 19th to 22 November 2015.**

**As a part of this occasion, the Government Organizations/Departments, NGOs, Corporations, Boards, Federations, Co-operatives, Financial Institutions, Private companies, Input Manufacturers and Dealers, SHGs related with Agriculture, Organic, food and value added food products manufacturers as well as others who are interested to take part in the exhibition and exhibit their products/services are required to reserve their stalls on or before 5-11-2015.**

**For more details interested exhibitors are requested to contact The Director of Extention, University of Agricultural Sciences, Hebbal, Bangalore-24. Phone: 080-23516353/ 23418883 Mobile: 9844176675, 9902754000, Fax. 23516836.**

**pallavi/babu/km**

# ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ

**ಬೆಂಗಳೂರು, ಸೆಪ್ಟೆಂಬರ್ 24 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:27–09–2015ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಉದಯರಾಗ**" ಎಂಬ ಶೀರ್ಷಿಕೆಯಡಿ ಶ್ರೀಮತಿ ಸುಮಾ ಕಂಠಿ ಮತ್ತು ತಂಡ, ಬೆಂಗಳೂರುರವರಿಂದ ಸುಗಮ ಸಂಗೀತ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.
2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಸಂಧ್ಯಾರಾಗ**" ಎಂಬ ಶೀರ್ಷಿಕೆಯಡಿ ಶ್ರೀ ಎಸ್.ರಾಮು ಮತ್ತು ತಂಡ, ಮೈಸೂರುರವರಿಂದ ಸುಗಮಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3. ಬೆಳಿಗ್ಗೆ 6.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
7. ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.
8. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I. ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- **ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಹಯೋಗದೊಂದಿಗೆ ಕುಮಾರಿ ಜಿ.ಜಿ. ಶಿರಿಷ ಮತ್ತು ತಂಡ, ಬೆಂಗಳೂರುರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 9.00 ಗಂಟೆಯಿಂದ ಬೆಳಿಗ್ಗೆ 10.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ಚಿನ್ ಮುದ್ರ ಅಕಾಡೆಮಿ ಆಫ್ ಪರ್‌ಫಾರ್‌ಮಿಂಗ್ ಆರ್ಟ್ಸ್‌ರವರ ವತಿಯಿಂದ ನೃತ್ಯ ಪ್ರದರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಸಂಜೆ 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಫೌಂಢೇಷನ್ ರವರ ಸಹಯೋಗದೊಂದಿಗೆ ಆರ್.ಜಿ.ಹಳ್ಳಿ ನಾಗರಾಜ, ಸಾಹಿತಿಗಳು, ಪತ್ರಕರ್ತರು ಹಾಗೂ ಸಂಸ್ಕೃತಿ ಚಿಂತಕರು ಇವರಿಂದ "ಕೆ.ಎಸ್.ನರಸಿಂಹಸ್ವಾಮಿಯವರ ಕಾವ್ಯಗಳ ಪರಿಚಯ" ಬಗ್ಗೆ ಉಪನ್ಯಾಸ ಕಾರ್ಯಕ್ರಮ ಮತ್ತು ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

### II. ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- **ಬೆಳಿಗ್ಗೆ 7.00 ರಿಂದ ಮದ್ಯಾಹ್ನ 1.00 ಗಂಟೆಯವರೆಗೆ ಭಾರತೀಯ ಕೃಷಿ ಸಂಶೋದನಾ ಸಂಸ್ಥೆಯ – ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲ ಬ್ಯೂರೋ, ಹೆಬ್ಬಾಳ, ಬೆಂಗಳೂರುರವರಿಂದ ಸಾರ್ವಜನಿಕರಿಗೆ ಕೀಟಗಳ ಕುರಿತು ಪ್ರಾತ್ಯಕ್ಷಿಕೆಯ ಮೂಲಕ ಅರಿವು ಮೂಡಿಸುವ (Awarenes of Insect World) ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

- ಬೆಳಿಗ್ಗೆ 6.00 ಗಂಟೆಯಿಂದ ಬೆಳಿಗ್ಗೆ 12.00 ಗಂಟೆಯವರೆಗೆ ಶ್ರೀಮತಿ ಜಯಶ್ರೀ ಇಕ್ಕೇರಿ, ಜಯನಗರ, ಬೆಂಗಳೂರುರವರಿಂದ ಮಿನಿಯೇಚರ್ ಗಾರ್ಡನ್ (Miniature Garden) ಬಗ್ಗೆ ಪ್ರಾತ್ಯಕ್ಷತೆ ಮತ್ತು ಮಾಹಿತಿ ಕಾರ್ಯಕ್ರಮ ಏರ್ಪಡಿಸಲಾಗಿದೆ.
- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 11.00 ಗಂಟೆಯವರೆಗೆ ಸಹಾಯ ಹೋಲಿಸ್ಟಿಕ್ ಇಂಟೆಗ್ರೇಟೀವ್ ಹಾಸ್ಪಿಟಲ್ ಪ್ರೈವೇಟ್ ಲಿಮಿಟೆಡ್, ಜಯನಗರ, ಬೆಂಗಳೂರುರವರ ವತಿಯಿಂದ ಅಯುರ್ವೇದ, ನ್ಯಾಚುರೋಪತಿ, ಹೋಮಿಯೋಪತಿ ಮತ್ತು ಯೋಗ ವಿಧಾನಗಳಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವ ಮಾಹಿತಿ ಮತ್ತು ಜಾಗೃತಿ ಕಾರ್ಯಕ್ರಮ ಹಾಗೂ ಆರೋಗ್ಯದ ತಪಾಸಣೆ, ಸಲಹೆಗಳು ಮತ್ತು ಗಿಡಮೂಲಿಕೆಗಳ ಸಿದ್ಧ ಔಷಧದ ಬಗ್ಗೆ ಮಾಹಿತಿ ನೀಡಲಾಗುವುದು.
  ಪಲ್ಲವಿ/ಬಾಬು/ಕೆಎಂ

**Photo Caption:**

submitting bonded level labour system enquiry committee report

## ವೈಜ್ಞಾನಿಕ ಹಂದಿ ಸಾಕಾಣಿಕೆ

ಬೆಂಗಳೂರು, ಸೆಪ್ಟೆಂಬರ್ 24 (ಕರ್ನಾಟಕ ವಾರ್ತೆ)

ಹಂದಿ ಸಂವರ್ಧನಾ ಕೇಂದ್ರ, ಹೆಸರಘಟ್ಟ, ಬೆಂಗಳೂರು -89 ಇಲ್ಲಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖಾ ವತಿಯಿಂದ ದಿನಾಂಕ 28-9-2015 ರಿಂದ 3 ದಿನಗಳ "ವೈಜ್ಞಾನಿಕ ಹಂದಿ ಸಾಕಾಣಿಕೆ" ಬಗ್ಗೆ ತರಬೇತಿಯನ್ನು ಏರ್ಪಡಿಸಲಾಗಿದ್ದು, ಇಚ್ಚೆಯುಳ್ಳವರು ತರಬೇತಿಗೆ ಹಾಜರಾಗಲು ತಮ್ಮ ಗುರುತಿನ ಚೀಟಿ ಹಾಗೂ ಇತ್ತೀಚಿನ 2 ಪಾಸ್‌ಪೋರ್ಟ್ ಅಳತೆಯ ಭಾವ ಚಿತ್ರಗಳನ್ನು ನೋಂದಾಯಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080- 2846 6456/ 9972743662 ನ್ನು ಸಂಪರ್ಕಿಸಬಹುದು.

ಪಲ್ಲವಿ/ಕೆಎಂ

## ಬಕ್ರೀದ್: ರಾಜ್ಯದ ಜನತೆಗೆ ವಾರ್ತಾ ಸಚಿವರ ಶುಭಾಶಯ

ಬೆಂಗಳೂರು, ಸೆಪ್ಟೆಂಬರ್ 24 (ಕರ್ನಾಟಕ ವಾರ್ತೆ)

ಬಕ್ರೀದ್ ಹಬ್ಬದ ಸಂದರ್ಭದಲ್ಲಿ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವ ಶ್ರೀ ಆರ್. ರೋಷನ್‌ಬೇಗ್ ಅವರು ರಾಜ್ಯದ ಜನತೆಗೆ, ವಿಶೇಷವಾಗಿ ಮುಸಲ್ಮಾನ ಬಾಂಧವರಿಗೆ, ಶುಭ ಹಾರೈಸಿದ್ದಾರೆ.

ಪಲ್ಲವಿ/ಕೆಎಂ

# ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ

ಬೆಂಗಳೂರು, ಸೆಪ್ಟೆಂಬರ್ 24 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯಾದ್ಯಂತ ಕರ್ನಾಟಕ ಶಿಕ್ಷಕರ ಅರ್ಹರಾ ಪರೀಕ್ಷೆಯು(KARTET-2015) 27-9-2015 ರ ಭಾನುವಾರದಂದು ರಾಜ್ಯಾದ್ಯಂತ ಒಟ್ಟು 1021 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದೆ. ಈ ಪರೀಕ್ಷೆಯಲ್ಲಿ ಪತ್ರಿಕೆ 1 ರಲ್ಲಿ 153802 ಮತ್ತು ಪತ್ರಿಕೆ -2 ರಲ್ಲಿ 196703 ಅಭ್ಯರ್ಥಿಗಳು ಇದ್ದು ಒಟ್ಟು ಎರಡು ಪತ್ರಿಕೆಗಳಿಂದ 350505 ಲಕ್ಷ ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ.

ಸದರಿ ಪರೀಕ್ಷೆಯು ಶಿಕ್ಷಕರ ಅರ್ಹತಾ ಪರೀಕ್ಷೆಯಾಗಿದ್ದು, ಈ ಪರೀಕ್ಷೆಯಲ್ಲಿ ಅರ್ಹತೆ ಹೊಂದಿರುವವರು ಮಾತ್ರ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಾಗುತ್ತಾರೆ. ಜಿಲ್ಲಾಡಳಿತ ನೇತೃತ್ವದಲ್ಲಿ ಈ ಪರೀಕ್ಷೆಯನ್ನು ನಡೆಸಲು ಸಾರ್ವಜನಿಕ ಶಿಕ್ಷಣ ಇಲಾಖೆಯು ತೀರ್ಮಾನಿಸಿದೆ. ಈ ಪರೀಕ್ಷೆ ನಡೆಸಲು ಜಿಲ್ಲೆಯ ಉಪ ನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಇವರನ್ನು ನೋಡೆಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ.

ಪಲ್ಲವಿ/ಕೆಎಂ